**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:-** ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮಗಳಿಂದ ಅನುಷ್ಠಾನಗೊಳಿಸುತ್ತಿರುವ ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಗೆ ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಸಾಲ ಯೋಜನೆಯ ಪರಿಷ್ಕೃತ ಮಾರ್ಗಸೂಚಿಗಳನ್ನು ಹೊರಡಿಸುವ ಕುರಿತು.

**ಓದಲಾಗಿದೆ:-**
1. ಆರ್ಥಿಕ ಇಲಾಖೆಯ ಆಯವ್ಯಯ ಸಲಹಾ ಟಿಪ್ಪಣಿ ಸಂಖ್ಯೆ: ಆಇ 07 ವೆಚ್ಚ- 3/2023, ದಿನಾಂಕ:05-08-2023
2. ಸರ್ಕಾರದ ಆದೇಶ ಸಂಖ್ಯೆ: ಹಿಂವಕ 496 ಬಿಎಂಎಸ್ 2022, ದಿನಾಂಕ: 21.03.2023.
3. ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ: ಹಿಂವಕ 496 ಬಿಎಂಎಸ್ 2022 ದಿನಾಂಕ:21.03.2023
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮ ಇವರ ಪ್ರಸ್ತಾವನೆ ಸಂಖ್ಯೆ:ಕಮಸಅನಿನಿ/ಸಿಆರ್-45/2023-24, ದಿನಾಂಕ:04.08.2023.

ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ ಬೆಂಗಳೂರು
15 SEP 2023
ವ್ಯ.ನಿ. | ಪ್ರವ್ಯ-1
ಸ.ಪ್ರವ್ಯ | ಪ್ರವ್ಯ-2
151
19-9-23
ಬೆಂಗಳೂರು-52.

**ಪ್ರಸ್ತಾವನೆ:-**

ಮೇಲೆ ಓದಲಾದ (1) ರ ಆಯವ್ಯಯ ಸಲಹಾ ಟಿಪ್ಪಣಿಯಲ್ಲಿ 2023-24ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-158 ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಸಂಬಂಧಪಟ್ಟಂತೆ ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗ ಮಾಡಿದ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಶೂನ್ಯ ಬಡ್ಡಿ ದರದಲ್ಲಿ ಪ್ರತಿ ವಿದ್ಯಾರ್ಥಿಗೆ ರೂ.20.00 ಲಕ್ಷಗಳ ಸಾಲ ಸೌಲಭ್ಯ ಒದಗಿಸಲಾಗುವುದು ಎಂದು ಘೋಷಿಸಲಾಗಿರುವ ಯೋಜನೆಯನ್ನು ಪ್ರಸಕ್ತ ಸಾಲಿನಲ್ಲಿ ನಿಗಮಗಳಿಗೆ ಒದಗಿಸಿರುವ ಅನುದಾನಕ್ಕೆ ಸೀಮಿತವಾಗಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಅಗತ್ಯ ಕ್ರಮವಹಿಸುವುದು ಎಂದು ತಿಳಿಸಲಾಗಿದೆ.

ಮೇಲೆ ಓದಲಾದ (2) ರ ಸರ್ಕಾರದ ತಿದ್ದುಪಡಿ ಆದೇಶದಲ್ಲಿ ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮಗಳಿಂದ ಅನುಷ್ಠಾನಗೊಳಿಸುತ್ತಿರುವ ವಿದೇಶಿ ವಿಶ್ವವಿದ್ಯಾಲಯದಲ್ಲಿ ಉನ್ನತ ವ್ಯಾಸಂಗಕ್ಕೆ ಪ್ರವೇಶ ಪಡೆಯುವ ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಗೆ ಸಾಲ ಯೋಜನೆ ಮಾರ್ಗಸೂಚಿಯಲ್ಲಿ ಇರುವ Only the top 50 Universities as per QS World University Ranking/THE University Ranking Scheme" ಎಂಬುದರ ಬದಲಾಗಿ Only the top 150 Universities as per QS World University Ranking/THE University Ranking Scheme" ಎಂದು ತಿದ್ದುಪಡಿ ಮಾಡಿ ಆದೇಶಿಸಲಾಗಿದೆ.

ಮೇಲೆ ಓದಲಾದ (3) ರ ಸರ್ಕಾರದ ತಿದ್ದುಪಡಿ ಆದೇಶದಲ್ಲಿ ಹಿಂದುಳಿದ ವರ್ಗಗಳ ನಿಗಮಗಳಿಂದ ಅನುಷ್ಠಾನಗೊಳಿಸುತ್ತಿರುವ ವಿದೇಶಿ ವಿಶ್ವವಿದ್ಯಾಲಯದ ಉನ್ನತ ವ್ಯಾಸಂಗಕ್ಕೆ ಸಾಲ ಯೋಜನೆಯ ಮಾರ್ಗಸೂಚಿಯಲ್ಲಿನ ಆದಾಯದ ಮಿತಿ ಮತ್ತು ಸಾಲದ ಮೊತ್ತವನ್ನು ಪರಿಷ್ಕರಣೆ ಮಾಡಿ ಆದೇಶಿಸಲಾಗಿದೆ.

13/9/23

...2

ಪ್ರಸ್ತುತ, ಮೇಲೆ ಓದಲಾದ (4) ರ ಪತ್ರದಲ್ಲಿ, ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮ ಇವರು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ವ್ಯಾಪ್ತಿಯಡಿ ಬರುವ ನಿಗಮಗಳಲ್ಲಿ ಅನುಷ್ಠಾನಗೊಳಿಸುತ್ತಿರುವ ವಿದೇಶಿ ವಿಶ್ವವಿದ್ಯಾಲಯದಲ್ಲಿ ಉನ್ನತ ವ್ಯಾಸಂಗಕ್ಕೆ ಪ್ರವೇಶ ಪಡೆಯುವ ಹಿಂದುಳಿದ ವರ್ಗದ ಅಭ್ಯರ್ಥಿಗಳಿಗೆ ಸಾಲ ನೀಡಲು ನಿಗಧಿಪಡಿಸಿದ world QS Ranking 150 Universities ಗಳನ್ನು world QS Ranking 500 Universities ಗೆ ಹೆಚ್ಚಿಸಲು ಹಾಗೂ ಪ್ರಸ್ತುತ ಚಾಲ್ತಿಯಲ್ಲಿರುವ ಶೇ.2% ಬಡ್ಡಿಯ ಬದಲಿಗೆ ಶೂನ್ಯ ಬಡ್ಡಿಯಲ್ಲಿ ಸಾಲ ಮಂಜೂರು ಮಾಡುವಂತೆ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 371 ಬಿಎಂಎಸ್ 2023,**
**ಬೆಂಗಳೂರು, ದಿನಾಂಕ:13-09-2023**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ವ್ಯಾಪ್ತಿಯಡಿ ಬರುವ ನಿಗಮಗಳಲ್ಲಿ ಅನುಷ್ಠಾನಗೊಳಿಸುತ್ತಿರುವ ವಿದೇಶಿ ವಿಶ್ವವಿದ್ಯಾಲಯದಲ್ಲಿ ಉನ್ನತ ವ್ಯಾಸಂಗಕ್ಕೆ ಪ್ರವೇಶ ಪಡೆಯುವ ಹಿಂದುಳಿದ ವರ್ಗದ ಅಭ್ಯರ್ಥಿಗಳಿಗೆ 2022-23ನೇ ಸಾಲಿನಿಂದ ಅನ್ವಯವಾಗುವಂತೆ ಅನುಷ್ಠಾನಗೊಳಿಸಲು ಈ ಕೆಳಕಂಡಂತೆ ಮಾರ್ಗಸೂಚಿಗಳನ್ನು ಪರಿಷ್ಕರಿಸಿ ಸರ್ಕಾರದ ಅನುಮೋದನೆ ನೀಡಿ ಆದೇಶಿಸಿದೆ.

1. Only students studying in the top 500 Universities as per QS/THE World University Ranking in the year of loan sanction will be eligible under this Scheme.
2. 2023-24ನೇ ಸಾಲಿನ ಶೂನ್ಯ ಬಡ್ಡಿ ದರದಲ್ಲಿ ಪ್ರತಿ ವಿದ್ಯಾರ್ಥಿಗೆ ರೂ.20.00 ಲಕ್ಷಗಳ ಸಾಲ ಸೌಲಭ್ಯ ಒದಗಿಸುವುದು.
3. Subject to condition 1 the selection will be finalised by the MD of the loan sanctioning Corporation.

ಮೇಲಿನ ಮೂರು ಅಂಶಗಳನ್ನು ಹೊರತುಪಡಿಸಿ, ಸರ್ಕಾರದ ಆದೇಶ ಸಂಖ್ಯೆ: ಹಿಂವಕ 05 ಬಿಎಂಎಸ್ 2022, ದಿನಾಂಕ:29.09.2022 ರಲ್ಲಿನ ಮಾರ್ಗಸೂಚಿಯಲ್ಲಿನ ಅಂಶಗಳು ಮುಂದುವರೆಯುತ್ತವೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

V. Akkamahadevi
13/9/23

(ವಿ.ಅಕ್ಕಮಹಾದೇವಿ)
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

13.9.23

**ಇವರಿಗೆ:-**

1. ಪ್ರಧಾನ ಮಹಾಲೇಖಪಾಲರು, (ಎ ಮತ್ತು ಇ), ಬೆಂಗಳೂರು.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು.